# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2638 |
| ಸದಸ್ಯರ ಹೆಸರು | : | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 25.03.2022. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮಾಂತರ ಪ್ರದೇಶದಲ್ಲಿ ಕೋಳಿ ಫಾರಂ ಕಟ್ಟಡ ನಿರ್ಮಾಣಕ್ಕೆ ಗ್ರಾಮ ಪಂಚಾಯಿತಿದಿಂದ ಕಟ್ಟಡ ಪರವಾನಿಗೆ ನೀಡಲು ಜಮೀನಿನ ಭೂಪರಿವರ್ತನೆ ಅವಶ್ಯಕತೆ ಇದೆಯೇ; | ಕರ್ನಾಟಕ ಭೂ ಸುಧಾರಣಾ ಕಾಯ್ದೆ 1961 ರ ಪ್ರಕರಣ 2(ಎ)(ಡಿ) ಮತ್ತು ಪ್ರಕರಣ 81 ರಡಿ ಕೋಳಿ ಫಾರಂಗಳು (ಕೋಳಿ ಸಾಕಾಣಿಕೆ) ಕೃಷಿ ಕಸುಬಾಗಿ ಪರಿಗಣಿಸಲಾಗಿದೆ. ರಾಜ್ಯದಲ್ಲಿ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ಕೃಷಿ ಉದ್ದೇಶದ ವ್ಯಾಪ್ತಿಗೆ ಒಳಪಡುವ ಕೋಳಿ ಫಾರಂ ಕಟ್ಟಡವನ್ನು ನಿರ್ಮಿಸಲು ಭೂ ಪರಿವರ್ತನೆ ಅಗತ್ಯವಿರುವುದಿಲ್ಲ, |
| (ಆ) | ಕಟ್ಟಡ ಪರವಾನಿಗೆ ಪಡೆಯಲು ಅಗತ್ಯವಾದ ಇನ್ನಿತರ ದಾಖಲಾತಿಗಳು ಯಾವುವು; | ಕಟ್ಟಡ ಪರವಾನಿಗೆ ಪಡೆಯಲು ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಎನ್.ಓ.ಸಿ., ತಹಶೀಲ್ದಾರ್ ರವರಿಂದ ನಿರಾಕ್ಷೇಪಣಾ ಪತ್ರ ಮತ್ತು ಪಹಣಿ ನೀಡಬೇಕಾಗಿರುತ್ತದೆ. |
| (ಇ) | ಕೋಳಿಫಾರಂಗೆ ಸಂಬಂಧಪಟ್ಟಂತೆ ಉದ್ಯಮ ಪರವಾನಿಗೆ ನೀಡುವ ಪ್ರಾಧಿಕಾರ ಯಾವುದು; | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 64 ರಂತೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಯಾವುದೇ ವಿಧವಾದ ಕಟ್ಟಡವನ್ನು ನಿರ್ಮಿಸಲು ಗ್ರಾಮ ಪಂಚಾಯತಿಯಿಂದ ಅನುಮತಿಯನ್ನು ಪಡೆಯಬೇಕಾಗಿರುತ್ತದೆ.<br><br>ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪಶುಸಂಗೋಪನೆ ಇಲಾಖೆಯು ವಿಧಿಸುವ ಷರತ್ತುಗಳನ್ನು ಪಾಲಿಸುವ ನಿಬಂಧನೆಗೊಳಪಟ್ಟು ಗ್ರಾಮ ಪಂಚಾಯತಿಯು ಪರವಾನಿಗೆ ನೀಡಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ. |
| (ಈ) | ಕೋಳಿ ಫಾರಂ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ಅನುಸರಿಸಬೇಕಾದ ಕ್ರಮಗಳು ಹಾಗೂ ಗ್ರಾಮ ಪಂಚಾಯಿತಿಗೆ ಒದಗಿಸಬೇಕಾದ ದಾಖಲೆಗಳು ಯಾವುವು? | ಕೋಳಿ ಫಾರಂ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ತಹಶೀಲ್ದಾರ್ ರವರಿಂದ ನಿರಾಕ್ಷೇಪಣಾ ಪತ್ರ, ಪಹಣಿ, ಕಟ್ಟಡ ಅನುಮತಿ ಪತ್ರ ಮತ್ತು ಕಂದಾಯ ರಶೀದಿ ದಾಖಲೆಗಳನ್ನು ನೀಡಬೇಕಾಗಿರುತ್ತದೆ. |

ಗ್ರಾಅಪ 159 ಗ್ರಾಪಂಅ 2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.